# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:04-12-2021 ರಂದು ಬೆಳಿಗ್ಗೆ:- 11:00 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

## ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ಕೋವಿಡ್-19 ಮಹಾಮಾರಿ ಸಾಂಕ್ರಮಿಕ ರೋಗ ಹರಡದಂತೆ ಮುಂಜಾಗ್ರತವಾಗಿ ತೆಗೆದುಕೊಳ್ಳಬಹುದಾದ ಕ್ರಮಗಳು.
2. ವಿಪತ್ತು ನಿರ್ವಹಣಾ ಸಮಿತಿ (Disaster Management Committee) ನಿರ್ವಹಿಸಬೇಕಾದ ಕ್ರಮಗಳ ಕುರಿತು.
3. ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.
4. ವಾರ್ಡಿನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು.
5. ಮುಂಗಾರು ಮಳೆಯಿಂದ ಸಂಭವಿಸಿದ/ಸಂಭವಿಸಬಹುದಾದ ಅನಾಹುತಗಳ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು.

## ವಾರ್ಡ್ ನಂ 192 ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದವರು

| ಕ್ರ.ಸಂ | ಹೆಸರು | ಹುದ್ದೆ | |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | 9845989978 |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | 9620687103 |
| 3 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | 9449844670 |
| 4 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | 9986835425 |
| 5 | ಶ್ರೀ.ಸಂತೋಷ್ ದೀಪು | ಅರಣ್ಯ | 8884324927 |
| 6 | ಶ್ರೀ.ರಮೇಶ್.ಎಲ್. | ಕಿ.ಆ.ಪ. | 9902785690 |
| 7 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | 9739453414 |
| 8 | ಶ್ರೀ.ರಾಜೇಂದ್ರ ರೆಡ್ಡಿ | ಸದಸ್ಯರು | 9986490283 |
| 9 | ಶ್ರೀ.ಮಂಜುನಾಥ | ಸದಸ್ಯರು | 9845680018 |
| 10 | ಶ್ರೀ.ರಮೇಶ್ | ಸದಸ್ಯರು | 9035515888 |

# ಸಭೆಯ ನಡವಳಿಗಳು

1. ಪ್ರಪ್ರಥಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ರೋಗದ ಬಗ್ಗೆ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಚರ್ಚಿಸಿದರು. ಕೋವಿಡ್-19 ಸಂಬಂಧ ಹಾಗೂ ಒಮಿಕ್ರಾನ್ ಎಂಬ ಹೊಸ ವೈರಸ್ ಹರಡುತ್ತಿರುವುದಾಗಿ ಇದರ ಸಂಬಂಧ ಮುಂಜಾಗ್ರತ ಕ್ರಮವಾಗಿ ಸರಿಯಾದ ಸಮಯಕ್ಕೆ ಚುಚ್ಚುಮದ್ದು ಹಾಕಿಸಿಕೊಳ್ಳಲು ಹಾಗೂ ಮಾಸ್ಕ್‌ಗಳನ್ನು ಬಳಸಲು ಮತ್ತು ಅಂತರ ಕಾಪಾಡಿಕೊಳ್ಳಲು ಸಭೆಯಲ್ಲಿ ಸೂಚಿಸಿರು

2. ವಾರ್ಡ್ ವ್ಯಾಪ್ತಿಯ ಮೈಕೋ ಬಡಾವಣೆಯಲ್ಲಿ 3ನೇ, 4ನೇ ಮತ್ತು 5ನೇ ಅಡ್ಡರಸ್ತೆಗಳ ಪಕ್ಕದ ಚರಂಡಿಗಳಲ್ಲಿ ಹೂಳು ತುಂಬಿದ್ದು ಅಕಾಲಿಕ ಮಳೆಯಿಂದಾಗಿ ಮಳೆಯ ನೀರು ಸರಿಯಾಗಿ ಹರಿಯದೇ ರಸ್ತೆಯ ಇಕ್ಕೆಲಗಳಲ್ಲಿ ಹರಿದು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ತಕ್ಷಣವೇ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಸದರಿ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

3. ವಾರ್ಡ್ ವ್ಯಾಪ್ತಿಯ ಮೈಕೋ ಬಡಾವಣೆಯಲ್ಲಿ ಸೊಳ್ಳೆಗಳು ಹೆಚ್ಚಾಗಿದ್ದು ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಯಿರುವುದರಿಂದ ಸದರಿ ಪ್ರದೇಶಗಳಲ್ಲಿ ಔಷದಿ ಸಿಂಪಡಣೆ ಮಾಡಲು ಸಭೆಯಲ್ಲಿ ಸಾರ್ವಜನಿಕರು ದೂರಿದರು ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ಉಪಸ್ಥಿತರಿದ್ದ ಕಿರಿಯ ಆರೋಗ್ಯ ಪರೀವೀಕ್ಷಕರು ರವರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

4. ವಾರ್ಡ್ ವ್ಯಾಪ್ತಿಯ ಸೆಂಟ್ರಲ್ ಎಕ್ಸೈಸ್ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ವ್ಯವಸ್ಥೆಯಿಲ್ಲವೆಂದು ಸಭೆಯಲ್ಲಿ ಸದರಿ ಪ್ರದೇಶದ ಜನರು ದೂರಿದರು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮವಹಿಸುವುದಾಗಿ ಹಾಗೂ ಅತೀ ಶೀಘ್ರದಲ್ಲಿ ಪರಿಹರಿಸುವುದಾಗಿ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯ ಚಿಕ್ಕತೋಗೂರು ಪ್ರದೇಶದಲ್ಲಿ ರಸ್ತೆಗಳು ಹಾಳಾಗಿದ್ದು ಸರಿಯಾದ ರಸ್ತೆ ನಿರ್ಮಾಣ ಮಾಡಲು ಸದರಿ ಪ್ರದೇಶದ ಸಾರ್ವಜನಿಕರು ಸಭೆಯಲ್ಲಿ ದೂರಿದರು ಈ ಸಮಸ್ಯೆಯ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿದರು. ಈ ಸಮಸ್ಯೆಯ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆಯವರಿಗೆ ಪತ್ರ ವ್ಯವಹರಿಸಲು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

6. ವಾರ್ಡ್ ವ್ಯಾಪ್ತಿಯ ಹೊಸೂರು ರಸ್ತೆಯಿಂದ ಬಸಾಪುರ ಮುಖ್ಯರಸ್ತೆಯವರೆಗೆ ರಸ್ತೆಯ ಪಕ್ಕದ ಪುಟ್‌ಪಾತ್‌ಗಳಲ್ಲಿ ಅಂಗಡಿಗಳು ಹೆಚ್ಚಾಗಿದ್ದು ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವುದಾಗಿ ದೂರಿದರು ಉಪಸ್ಥಿತರಿದ್ದ ಸಹಾಯಕ ಅಬಿಯಂತರರಿಗೆ ಕ್ರಮವಹಿಸುವಂತೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

7. ವಾರ್ಡ್ ವ್ಯಾಪ್ತಿಯ ಚಿಕ್ಕತೋಗೂರು ದೃಷ್ಟಿಮಾಂದ್ಯ ಶಾಲೆಯ ಎದುರು ರಸ್ತೆಗೆ ಹಂಪ್(ವೇಗತಡೆ) ಅಳವಡಿಸಬೇಕೆಂದು ದೂರಿದರು. ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

8. ಸದರಿ ವಾರ್ಡ್ ವ್ಯಾಪ್ತಿಯ ಬಸಾಪುರ ಸರ್ಕಾರಿ ಶಾಲೆಗೆ ಟ್ಯಾಂಕರ್ ಮುಖಾಂತರ ನೀರು ಸರಬರಾಜು ಮಾಡುವಂತೆ ಮನವಿ ಮಾಡಿಕೊಂಡರು, ಸದರಿ ವಿಷಯವನ್ನು ಪರಿಶೀಲಿಸಿ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು, ರವರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

9. ವಾರ್ಡ್ ವ್ಯಾಪ್ತಿಯ ವಿಶ್ವಪ್ರಿಯಾ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಪೈಪ್‌ಗಳಿಗೆ ಸ್ಯಾನಿಟರಿ ಸಂಪರ್ಕ ಹೊಂದಿದ್ದು ಕುಡಿಯುವ ನೀರು ಕಲುಷಿತವಾಗುತ್ತಿರುವುದಾಗಿ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

10. ವಾರ್ಡ್ ವ್ಯಾಪ್ತಿಯ ದೊಡ್ಡಕಮ್ಮನಹಳ್ಳಿಯಲ್ಲಿ ಬೀದಿ ದೀಪದ ವ್ಯವಸ್ಥೆ ಸರಿಯಾಗಿರುವುದಿಲ್ಲ ಎಂದು ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

11. ಮುಂದಿನ ವಾರ್ಡ್ ಕಮಿಟಿ ಸಭೆಗೆ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಜರಾಗುವಂತೆ ಸೂಚಿಸಿದರು ತಪ್ಪಿದ್ದಲ್ಲಿ ಮೇಲಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಸೂಕ್ತ ಮಾರ್ಗದರ್ಶನಕ್ಕಾಗಿ ತಿಳಿಸಲಾಗುವುದು ಎಂದು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ.
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ ಮಂಡಿಸಿದೆ
4) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.
5) ಕಛೇರಿ ಕಡತಕ್ಕೆ